ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001.

ಕರ್ನಾಟಕ ಸರಕಾರ
(ಕಂದಾಯ ಇಲಾಖೆ)

Deputy Commissioner & District Magistrate's Office, Dakshina Kannada District, Mangaluru – 575 001.

ನಂ.ಎಂಎಜಿ(2)ಸಿಆರ್. 156/2021/133465/ಸಿ4

ದಿನಾಂಕ: 29-03-2021

# ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್ -19 ಹರಡುವಿಕೆಯನ್ನು ಪರಿಣಾಮಕಾರಿಯಾಗಿ ನಿಯಂತ್ರಿಸುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸುವ ಕುರಿತು

ಉಲ್ಲೇಖ: 1) ಸರಕಾರದ ಆದೇಶ ಸಂ. ಎಚ್ ಎಫ್ ಡಬ್ಲ್ಯೂ 146 ಸಿಜಿಎಂ 2020 ದಿನಾಂಕ: 24-03-2021

2) ಸರ್ಕಾರದ ಆದೇಶ ಸಂಖ್ಯೆ: ಆಕುಕ 59 ಸಿ ಜಿ ಎಂ 2021 ದಿನಾಂಕ: 25-03-2021

3) ಸರ್ಕಾರದ ಸೇರ್ಪಡೆ ಆದೇಶ ಸಂ: ಆಕುಕ /59/ಸಿಜಿಎಂ/2021 ದಿನಾಂಕ: 27-03-2021

=======@=======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 (ಕೋರೊನಾ ವೈರಾಣು ಕಾಯಿಲೆ - 2019) ನಿಯಂತ್ರಣಕ್ಕೆ ಸಂಬಂಧಿಸಿದಂತೆ ಸರ್ಕಾರದ ನಿರ್ದೇಶನದಂತೆ ಜಿಲ್ಲಾಡಳಿತವು ಎಲ್ಲಾ ಅವಶ್ಯ ಕ್ರಮಗಳನ್ನು ಕೈಗೊಳ್ಳುತ್ತಿದ್ದು, ಪ್ರಸ್ತುತ ಜಿಲ್ಲೆಯಲ್ಲಿ ಕೋವಿಡ್ -19 ಸಾಂಕ್ರಾಮಿಕ ರೋಗ ಹರಡುವಿಕೆಯ ಆತಂಕವು ಪುನಃ ಪ್ರಾರಂಭವಾಗಿದೆ. ಕೋವಿಡ್ -19 ಪರಿಸ್ಥಿತಿಯನ್ನು ಅವಲೋಕಿಸಿ ಕಳೆದ ಹದಿನೈದು ದಿನಗಳಿಂದ ಕೋವಿಡ್ ಪ್ರಕರಣಗಳು ಸತತವಾಗಿ ಏರಿಕೆಯಾಗುತ್ತಿರುವುದರಿಂದ ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಮುಂಬರುವ ಧಾರ್ಮಿಕ ಹಬ್ಬಗಳಾದ ಯುಗಾದಿ, ಹೋಳಿ ಹಬ್ಬ, ಷಬ್- ಎ- ಬರಾತ್, ಗುಡ್ ಫ್ರೈಡೇ ಇತ್ಯಾದಿ ಸಂದರ್ಭಗಳಲ್ಲಿ ರಾಜ್ಯದ ಯಾವುದೇ ಸಾರ್ವಜನಿಕ ಸ್ಥಳಗಳು/ ಸಾರ್ವಜನಿಕ ಮೈದಾನ/ ಸಾರ್ವಜನಿಕ ಉದ್ಯಾನವನಗಳು/ ಮಾರುಕಟ್ಟೆಗಳು/ ಧಾರ್ಮಿಕ ಪ್ರದೇಶಗಳು ಇತ್ಯಾದಿಗಳಲ್ಲಿ ಸಾರ್ವಜನಿಕ ಸಮಾರಂಭಗಳು/ ಸಭೆಗಳನ್ನು ನಡೆಸದಂತೆ ಖಚಿತಪಡಿಸಿಕೊಳ್ಳಲು ಆದೇಶಿಸಲಾಗಿರುತ್ತದೆ ಹಾಗೂ ಉಲ್ಲೇಖ(3)ರ ಸೇರ್ಪಡೆ ಆದೇಶದಲ್ಲಿ ಮೇಲಿನ ಧಾರ್ಮಿಕ ಉತ್ಸವಗಳೊಂದಿಗೆ ಜಾತ್ರೆಗಳನ್ನು/ಮೇಳಗಳನ್ನು ನಡೆಸದಂತೆ ಆದೇಶಿಸಲಾಗಿರುತ್ತದೆ.

ಆದ್ದರಿಂದ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕೋವಿಡ್ ವೈರಾಣು ಹರಡುವಿಕೆಯ ಆತಂಕ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಉಲ್ಲೇಖಿತ ಸರ್ಕಾರದ ಆದೇಶಗಳಲ್ಲಿ ಸೂಚಿಸಿರುವಂತೆ, ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳುವುದು ಅತ್ಯಗತ್ಯವೆಂದು ಮನಗಂಡು ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ., ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144(3), ವಿಪತ್ತು ನಿರ್ವಹಣಾ ಕಾಯ್ದೆ 2005ರ ಕಲಂ (26) ಹಾಗೂ (34) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಈ ಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಿಷೇಧಾಜ್ಞೆಯನ್ನು ಜಾರಿಗೊಳಿಸಿ ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

## *ಆದೇಶ*

1) ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಎಲ್ಲಾ ಧಾರ್ಮಿಕ ಸ್ಥಳಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ಜಾತ್ರೆ, ಸಭೆ, ಸಮಾರಂಭ ಹಾಗೂ ಆಚರಣೆಗಳನ್ನು ನಿಷೇಧಿಸಿದೆ.

2) ಎಲ್ಲಾ ರೀತಿಯ ಧಾರ್ಮಿಕ ಆಚರಣೆಗಳನ್ನು ಸಾಂಕೇತಿಕವಾಗಿ ಆಚರಿಸುವುದು. ಮುಂಬರುವ ಧಾರ್ಮಿಕ ಹಬ್ಬಗಳಾದ ಹೋಳಿ ಹಬ್ಬ, ಯುಗಾದಿ, ಷಬ್- ಎ- ಬರಾತ್, ಗುಡ್ ಫ್ರೈಡೇ ಇತ್ಯಾದಿ ಸಂದರ್ಭಗಳಲ್ಲಿ ಜಿಲ್ಲೆಯ ಯಾವುದೇ ಸಾರ್ವಜನಿಕ

ಸ್ಥಳಗಳು/ ಸಾರ್ವಜನಿಕ ಮೈದಾನ/ ಸಾರ್ವಜನಿಕ ಉದ್ಯಾನವನಗಳು/ ಮಾರುಕಟ್ಟೆಗಳು/ ಧಾರ್ಮಿಕ ಪ್ರದೇಶಗಳು ಇತ್ಯಾದಿಗಳಲ್ಲಿ ಸಾರ್ವಜನಿಕ ಸಮಾರಂಭಗಳು/ ಸಭೆಗಳನ್ನು ನಡೆಸುವುದನ್ನು ಜಾತ್ರೆಗಳು/ಮೇಳಗಳನ್ನು ನಡೆಸುವುದನ್ನು ನಿಷೇಧಿಸಲಾಗಿದೆ.

3) ಸಾರ್ವಜನಿಕ ಸ್ಥಳಗಳಲ್ಲಿ ಸಾರ್ವಜನಿಕರು ಕೋವಿಡ್ ಸಮುಚಿತ ವರ್ತನೆಯನ್ನು (ಅಂದರೆ ಮಾಸ್ಕ್ ಧರಿಸುವುದು, ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಉಗುಳದಿರುವುದು) ಪಾಲಿಸುವುದು ಕಡ್ಡಾಯವಾಗಿರುತ್ತದೆ. ತಪ್ಪಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಸರ್ಕಾರದ ಉಲ್ಲೇಖ(1)ರ ಆದೇಶದಂತೆ ಕ್ರಮವಹಿಸುವುದು.

ಮೇಲಿನ ಆದೇಶವನ್ನು ಯಾವುದೇ ವ್ಯಕ್ತಿ/ವ್ಯಕ್ತಿಗಳು ಉಲ್ಲಂಘಿಸಿದ್ದಲ್ಲಿ ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005 ರ ಸೆಕ್ಷನ್ 51 ರಿಂದ 60ರ ಅನ್ವಯ, ಐಪಿಸಿ ಸೆಕ್ಷನ್ 188ರಂತೆ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧಿನಿಯಮ 2020ರ ಸೆಕ್ಷನ್ 4, 5 ಮತ್ತು 10 ರಂತೆ ಕ್ರಮ ಜರುಗಿಸಲಾಗುವುದು.

ಈ ಆದೇಶವನ್ನು ದಿನಾಂಕ: 29-03-2021 ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D. K.
GOVT. OF KARNATAKA

ಡಾ. ರಾಜೇಂದ್ರ ಕೆ.ವಿ, ಭಾ.ಆ.ಸೇ
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

1. ಪೊಲೀಸ್ ಆಯುಕ್ತರು, ಮಂಗಳೂರು ನಗರ, ಮಂಗಳೂರು-ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
3. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು. ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
4. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು--ಇವರಿಗೆಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ
5. ಉಪ ಆಯುಕ್ತರು, ಅಬಕಾರಿ ಇಲಾಖೆ, ಮಂಗಳೂರು
6. ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
8. ಸಹಾಯಕ ಆಯುಕ್ತರು, ಮಂಗಳೂರು/ಪುತ್ತೂರು ಉಪವಿಭಾಗ
9. ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಂಗಳೂರು / ಪುತ್ತೂರು / ಬಂಟ್ವಾಳ.
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
11. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್.ಆರ್.ಟಿ.ಸಿ., ಮಂಗಳೂರು / ಪುತ್ತೂರು.
12. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಮಂಗಳೂರು.
13. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳಿಗೆ
14. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು- ಇವರಿಗೆ ಕಳುಹಿಸುತ್ತಾ ಜಿಲ್ಲೆಯ ಎಲ್ಲಾ ಪ್ರಮುಖ ಸುದ್ದಿ ಮಾಧ್ಯಮಗಳಲ್ಲಿ ಪ್ರಚುರ ಪಡಿಸಲು ತಿಳಿಸಿದೆ.

Email-dc.mnglr@gmail.com website: dk.nic.in Phone:0824-2220590/588